**ಅರಣ್ಯ ಇಲಾಖೆ**

**ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಮೈಸೂರು ವೃತ್ತ, ಮೈಸೂರು**

ಸಂಖ್ಯೆ– ಎ2/ಸಿಬ್ಬಂದಿ/ಆ.ಕ/ನೇ.ನೇ/ಸಿಆರ್–16/2022–23

ಅರಣ್ಯ ಭವನ, ಅಶೋಕಪುರಂ, ಮೈಸೂರು –570008
ದೂರವಾಣಿ ಸಂಖ್ಯೆ–2480875
ದಿನಾಂಕ: 15–03–2023.

ಗೆ:

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು
(ಅರಣ್ಯ ಪಡೆ ಮುಖ್ಯಸ್ಥರು) ಬೆಂಗಳೂರು

ಮಾನ್ಯರೆ,

ವಿಷಯ :– ಆನೆ ಕಾವಾಡಿಗ ನೇರ ನೇಮಕಾತಿ ಹುದ್ದೆಗಳಿಗೆ ಹೊರಡಿಸಿರುವ ಅಧಿಸೂಚನೆಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ :– 1. ತಮ್ಮ ಕಛೇರಿ ಪತ್ರ ಸಂಖ್ಯೆ– ಕೆ.ಎಫ್.ಡಿ /ಹೆಚ್.ಓ.ಎಫ್.ಎಫ್/ಬಿ9(ಆರ್.ಸಿ.ಟಿ) /11/ 2022–23 ಪಿ & ಆರ್ ದಿನಾಂಕ: 28–02–2023.

2. ಈ ಕಛೇರಿ ಅಧಿಸೂಚನೆ ಸಂಖ್ಯೆ– ಎ2/ಸಿಬ್ಬಂದಿ/ಆಕ/ನೇನೇ/ ಸಿಆರ್–16/2022–23 ದಿನಾಂಕ: 15–03–2023.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ತಮ್ಮ ಕಛೇರಿ ಪತ್ರದಲ್ಲಿ ಆನೆ ಕಾವಾಡಿ ವೃಂದದ ನೇರ ನೇಮಕಾತಿಗೆ ಸಂಬಂಧಿಸಿದಂತೆ ಈ ವೃತ್ತ ವ್ಯಾಪ್ತಿಗೆ ಹಂಚಿಕೆ ಮಾಡಲಾದ 5 ಸಂಖ್ಯೆ ಹುದ್ದೆಗಳಿಗೆ ನಿಯಮಾನುಸಾರ ನೇರ ನೇಮಕಾತಿ ಪ್ರಕ್ರಿಯೆಯನ್ನು ದಿನಾಂಕ : 15–03–2023 ರೊಳಗೆ ಅಧಿಸೂಚನೆ ಹೊರಡಿಸಿ ಅನುಪಾಲನ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ.

ಅದರಂತೆ, ಈ ವೃತ್ತಕ್ಕೆ ಹಂಚಿಕೆ ಮಾಡಲಾದ 5 ಸಂಖ್ಯೆ ಆನೆ ಕಾವಾಡಿಗ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಉಲ್ಲೇಖ (2) ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯನ್ನು ಈ ಪತ್ರದೊಂದಿಗೆ ಲಗತ್ತಿಸಿ ತಮ್ಮ ಅವಗಾಹನೆಗೆ ಸಲ್ಲಿಸುತ್ತಾ, ಸದರಿ ಅಧಿಸೂಚನೆಯನ್ನು ಇಲಾಖೆಯ ಅಧಿಕೃತ ಜಾಲತಾಣ www.kfdrecruitment.in ನಲ್ಲಿ ಪ್ರಕಟಿಸಬೇಕೆಂದು ಕೋರುತ್ತೇನೆ.

ತಮ್ಮ ನಂಬುಗೆಯ,

A2 -15-03-2023.

**ಅರಣ್ಯ ಸಂರಕ್ಷಣಾಧಿಕಾರಿ**
**ಹಾಗೂ ಆನೆ ಕವಾಡಿಗಳ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ**
**ಮೈಸೂರು ವೃತ್ತ, ಮೈಸೂರು**

# ಆನೆ ಕವಾಡಿ ಹುದ್ದೆಗೆ ಅರ್ಜಿ

## APPLICATION FORM FOR THE POST OF ELEPHANT KAVADI

ಪ್ರಕಟಣೆ ಸಂಖ್ಯೆ:ಎ2/ಸಿಬ್ಬಂದಿ/ಆ.ಕ./ನೇನೇ/ಸಿಆರ್-16/2022-23 ದಿನಾಂಕ 15-03-2023

ಕನ್ನಡ ಅಥವಾ ಆಂಗ್ಲ ಭಾಷೆಯ ಸ್ಪಷ್ಟ ಅಕ್ಷರಗಳಲ್ಲಿ ಭರ್ತಿ ಮಾಡಿ
Fill Legibly in English (Capitals) or Kannada letters only

ಯಾವುದೇ ಅರ್ಜಿ ಶುಲ್ಕ ಇರುವುದಿಲ್ಲ. There is no Application Fee.
ಯಾವುದೇ ಪ್ರಮಾಣ ಪತ್ರ ಲಗತ್ತಿಸುವಂತಿಲ್ಲ. No document to be enclosed.

ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸಿ
Affix Recent Passport Size Photograph

1.ಅಭ್ಯರ್ಥಿಯ ಹೆಸರು
Name of the Candidate ☐☐☐☐☐☐☐☐☐☐☐☐☐☐

2.ಲಿಂಗ/ Sex
ಪುರುಷ Male ☐ ಮಹಿಳೆ Female ☐ ತೃತೀಯ ಲಿಂಗ Others ☐

3.ಜನ್ಮ ದಿನಾಂಕ/Date of Birth
(ಶಾಲಾ ದಾಖಲಾತಿ / ಜನನ ಪ್ರಮಾಣ ಪತ್ರ/ ಆಧಾರ್ ಕಾರ್ಡ್)
ದಿನ / Day ☐☐ ತಿಂಗಳು/ Month ☐☐ ವರ್ಷ/ Year ☐☐☐☐

4.ಪತ್ರ ವ್ಯವಹಾರಕ್ಕಾಗಿ ಪೂರ್ಣ ವಿಳಾಸ
Address for Correspondence

ಪಿನ್ ಕೋಡ್/ PIN CODE ☐☐☐☐☐☐

5.ವರ್ಗೀಕರಣ (ಅ)/ Classification (A)
ಸೂಕ್ತ ಅಂಕಣವನ್ನು (√) ಟಿಕ್ ಮಾಡಿ

- ☐ ಸಾಮಾನ್ಯ ವರ್ಗ General Merit
- ☐ ಪ್ರವರ್ಗ – I Category – I
- ☐ ಪ್ರವರ್ಗ-II(ಎ) Category–II(a)
- ☐ ಪ್ರವರ್ಗ-II(ಬಿ) Category–II(b)
- ☐ ಪ್ರವರ್ಗ-III(ಎ) Category–III(a)
- ☐ ಪ್ರವರ್ಗ-III(ಬಿ) Category–III(b)
- ☐ ಪರಿಶಿಷ್ಟ ಜಾತಿ SC
- ☐ ಪರಿಶಿಷ್ಟ ಪಂಗಡ ST

6.ವರ್ಗೀಕರಣ (ಆ)/ Classification (B)
ಸೂಕ್ತ ಅಂಕಣವನ್ನು (√)ಟಿಕ್ ಮಾಡಿ

- ☐ ಮಾಜಿ ಸೈನಿಕರು Ex-Serviceman
- ☐ ಯೋಜನೆ ನಿರಾಶ್ರಿತರ Project Displaced
- ☐ ಕನ್ನಡ ಮಾಧ್ಯಮ Kannada Medium
- ☐ ಮಹಿಳೆ Women
- ☐ ಗ್ರಾಮೀಣ Rural
- ☐ ತೃತೀಯ ಲಿಂಗ Others

7.ಕರ್ನಾಟಕ ರಾಜ್ಯದ ವ್ಯಾಪ್ತಿಯ ಅಧಿಸೂಚಿತ ಅರಣ್ಯದೊಳಗೆ ವಾಸಿಸುವರಾಗಿರತಕ್ಕದ್ದು.(√)ಟಿಕ್ ಮಾಡಿ
☐ ಹೌದು Yes ☐ ಇಲ್ಲ No

8.ಆನೆ ನಿರ್ವಹಣೆಯಲ್ಲಿ ಹೊಂದಿರುವ ಅನುಭವ (ವರ್ಷಗಳಲ್ಲಿ)
No. of Years of Experience in handling Elephants ☐☐ ವರ್ಷಗಳು

ಮೇಲಿನ ಮಾಹಿತಿಗಳು ಸತ್ಯವಾಗಿವೆಎಂದು ಪ್ರಮಾಣ ಮಾಡುತ್ತೇನೆ.

**Place / ಸ್ಥಳ:**
**Date / ದಿನಾಂಕ:**

ಅಭ್ಯರ್ಥಿಯ ಸಹಿ
**Signature of the Candidate**

**2022–2023 ನೇ ಸಾಲಿನಲ್ಲಿ ಖಾಲಿ ಇರುವ ಆನೆ ಕಾವಾಡಿಗ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು**

**ವೇಳಾ ಪಟ್ಟಿ**

| ಕ್ರ.ಸಂ | ನೇಮಕಾತಿ ಪ್ರಕ್ರಿಯೆ ವಿವರ | ದಿನಾಂಕ |
|---|---|---|
| 1 | ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸುವ ಕುರಿತು ಅಧಿಸೂಚನೆ ಹೊರಡಿಸುವುದು ಹಾಗೂ ಪ್ರಕಟಣೆ ಹೊರಡಿಸುವುದು. ಈ ಪ್ರಕಟಣೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳುವುದು. ಪ್ರಮುಖ ಎರಡು ಕನ್ನಡ ದಿನಪತ್ರಿಕೆಗಳಲ್ಲಿ ಪ್ರಕಟಣೆ ಪ್ರಕಟಿಸಲು ಕ್ರಮ ಕೈಗೊಳ್ಳುವುದು. | 15–03–2023 |
| 2 | ಅರ್ಜಿ ಸಲ್ಲಿಸಲು ಅವಧಿ | 30–03–2023 ರಿಂದ 29–04–2023 |
| 3 | ಅಭ್ಯರ್ಥಿಗಳ ಸಂದರ್ಶನ ದಿನಾಂಕ | 16–05–2023 ರಿಂದ 17–05–2023 |
| 4 | ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ದಿನಾಂಕ | 29–05–2023 |
| 5 | ಅಂತಿಮ ಆಯ್ಕೆ ಪಟ್ಟಿ ಪ್ರಕಟಣೆ ದಿನಾಂಕ | 01–06–2023 |
| 6 | ನೇಮಕಾತಿ ಆದೇಶ ನೀಡುವುದು | 01–07–2023 |

**ಅರಣ್ಯ ಸಂರಕ್ಷಣಾಧಿಕಾರಿ**
**ಹಾಗೂ ಆನೆ ಕಾವಾಡಿ ಹುದ್ದೆಯ ನೇರ**
**ನೇಮಕಾತಿ ಆಯ್ಕೆ ಪ್ರಾಧಿಕಾರ,**
**ಮೈಸೂರು ವೃತ್ತ, ಮೈಸೂರು.**

## ಅರಣ್ಯ ಇಲಾಖೆ

**ಅರಣ್ಯ ಸಂರಕ್ಷಣಾಧಿಕಾರಿಗಳು, ಮೈಸೂರು ವೃತ್ತ ಹಾಗೂ ಆನೆ ಕಾವಾಡಿ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ, ಮೈಸೂರು**

***: ಅಧಿಸೂಚನೆ :***

***ಸಂಖ್ಯೆ–ಎ2/ಸಿಬ್ಬಂದಿ/ಆ.ಕ/ನೇ.ನೇ/ಸಿಆರ್–16/2022–23 ದಿನಾಂಕ: 15–03–2023***

***ಆನೆ ಕಾವಾಡಿ ಹುದ್ದೆಗೆ ನೇರ ನೇಮಕಾತಿ***

**ವಿಷಯ:** 2022–23ನೇ ಸಾಲಿನಲ್ಲಿ ಮೈಸೂರು ಅರಣ್ಯ ವೃತ್ತದಲ್ಲಿ ಖಾಲಿ ಇರುವ ಆನೆ ಕಾವಾಡಿಗ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು

**ಉಲ್ಲೇಖ:** ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯ ಪಡೆ ಮುಖ್ಯಸ್ಥರು,), ಬೆಂಗಳೂರು ರವರ ಕಛೇರಿ ಇ–ಆಫೀಸ್ ಪತ್ರ ಸಂಖ್ಯೆ–ಕೆ.ಎಫ್.ಡಿ/ಹೆಚ್.ಓ.ಎಫ್.ಎಫ್/ಬಿ9(ಆರ್.ಸಿ.ಟಿ)/11/2022–23 ಪಿ & ಆರ್ ದಿನಾಂಕ: 28–02–2023.

******

ಅರಣ್ಯ ಇಲಾಖೆಯ ಮೈಸೂರು ವೃತ್ತ ವ್ಯಾಪ್ತಿಯಲ್ಲಿ ಒಟ್ಟು 5 ಆನೆ ಕಾವಾಡಿ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಮುದ್ದಾಂ ಮೂಲಕ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ಭರ್ತಿ ಮಾಡಿದ ಅರ್ಜಿಯನ್ನು **"ಆನೆ ಕಾವಾಡಿ ಹುದ್ದೆಗೆ ಅರ್ಜಿ"** ಎಂದು ಕವರಿನ ಮೇಲೆ ಬರೆದು **ಅರಣ್ಯ ಸಂರಕ್ಷಣಾಧಿಕಾರಿಗಳು, ಮೈಸೂರು ವೃತ್ತ, ಮೈಸೂರು** ಇಲ್ಲಿಗೆ **ದಿನಾಂಕ: 29–04–2023** ರ **ಸಂಜೆ 5.30** ಗಂಟೆಗೆ ಅಥವಾ ಅದಕ್ಕಿಂತ ಮುಂಚಿತವಾಗಿ ಸಲ್ಲಿಸುವುದು. ಅರ್ಜಿಗಳಿಗೆ ಯಾವುದೇ ತರಹದ ಸ್ವೀಕೃತಿ ಪತ್ರ ನೀಡಲಾಗುವುದಿಲ್ಲ. ಅರ್ಜಿ ನಮೂನೆ ಮಾದರಿ ಹಾಗೂ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಹಾಗೂ ಕಛೇರಿಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ. ಅಂಚೆ ಮೂಲಕ ಅರ್ಜಿ ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಸ್ವೀಕೃತವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ಆ ದಿನಾಂಕದ ಮರು ಕೆಲಸದ ದಿನವು ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕವಾಗುತ್ತದೆ. (ಆ ದಿನದ ಸಂಜೆ 5–30 ರ ವರೆಗೆ) ಅರ್ಜಿ ಸಲ್ಲಿಸುವ ಅವಧಿ **ದಿನಾಂಕ: 30–03–2023 ರಿಂದ 29–04–2023** ರ ಸಂಜೆ 5–30 ರವರೆಗೆ

***1. ಹುದ್ದೆಗಳ ವಿವರ:***

**ಹುದ್ದೆಯ ಹೆಸರು:** ಆನೆ ಕಾವಾಡಿ

**ವೇತನ ಶ್ರೇಣಿ:** 18600–450–20400–500–22400–550–24600–600–27000–650–29600–750–32600

**ವಿಭಾಗ:** ರಾಜೀವ್‌ಗಾಂಧಿ ರಾಷ್ಟ್ರೀಯ ಉದ್ಯಾನವನ, ಹುಣಸೂರು

## 2. ಮೀಸಲಾತಿ ವರ್ಗೀಕರಣ: ನೇರ ನೇಮಕಾತಿ ಹುದ್ದೆಗಳು

| ಪ್ರವರ್ಗ ನೇರ ಮೀಸಲಾತಿ (Vertical Reservation) | ಸಮತಳ ಮೀಸಲಾತಿ (Horizontal Reservation) | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ನಿಯೋಜನೆಯಿಂದ ನಿರಾಶ್ರಿತಗೊಂಡ ಅಭ್ಯರ್ಥಿ | |
| ಪರಿಶಿಷ್ಟ ಜಾತಿ | 1 | – | – | – | – | – | 1 |
| ಸಾಮಾನ್ಯ ಅರ್ಹತೆ | 1 | 1 | – | – | – | – | 2 |
| ಪರಿಶಿಷ್ಟ ಪಂಗಡ | 1 | – | – | – | – | – | 1 |
| ಪ್ರವರ್ಗ–I | 1 | – | – | – | – | – | 1 |
| ಒಟ್ಟು | 4 | 1 | – | – | – | – | 5 |

**ಸೂಚನೆ:** ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/52/ಎಸ್‌ಆರ್‌ಆರ್/99 ದಿನಾಂಕ: 08.11.2002 ರ ಆದೇಶದಲ್ಲಿ ಅಂಗವಿಕಲ ಅಭ್ಯರ್ಥಿಯ ಮೀಸಲಾತಿ ಕುರಿತಂತೆ ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ಆನೆ ಕಾವಾಡಿ ಹುದ್ದೆಯ ನೇಮಕಾತಿಯಲ್ಲಿ ಅಂಗವಿಕಲರಿಗೆ ಮೀಸಲಾತಿ ಅವಕಾಶ ಕಲ್ಪಿಸದೇ ಇರುವುದರಿಂದ ಅಂಗವಿಕಲ ಬಿಂದುವನ್ನು ಇತರೆ ಸಮತಳ ಮೀಸಲಾತಿಯಡಿಯಲ್ಲಿ ಸೇರಿಸಲಾಗುವುದು.

## 3. ಅರ್ಹತೆ ಮತ್ತು ನಿಬಂಧನೆ:

3.1. **ಪೌರತ್ವ:** ಈ ಕೆಳಗೆ ಕಾಣಿಸಿದ ವ್ಯಕ್ತಿಗಳು ಮಾತ್ರ ಈ ಅಧಿಸೂಚನೆಯಲ್ಲಿ ವಿವರಿಸಿದ ಹುದ್ದೆಗಳಿಗೆ ನೇರ ನೇಮಕಾತಿ ಹೊಂದಲು ಅರ್ಹರಾಗಿರುತ್ತಾರೆ.

(ಅ) ಭಾರತದ ಪೌರ, (ಆ) ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ 1962 ರ ಜನವರಿ 1ನೇ ದಿನಾಂಕಕ್ಕೆ ಮೊದಲು ಭಾರತಕ್ಕೆ ಬಂದಿರುವ ಟಿಬೇಟಿಯನ್ಸ್ ನಿರಾಶ್ರಿತರು, (ಇ) ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ ಪಾಕಿಸ್ತಾನ, ಮಯಾನ್ಮಾರ್ (ಬರ್ಮಾ), ಶ್ರೀಲಂಕಾ, ಪೂರ್ವ ಆಫ್ರಿಕಾದ ರಾಷ್ಟ್ರಗಳಾದ ಕೀನ್ಯಾ, ಉಗಾಂಡಾ, ತಾಂಜನೀಯ, ಸಂಯುಕ್ತ ಗಣರಾಜ್ಯ (ಹಿಂದಿನ ಟಾಂಗ್‌ನಿಕಾ, ಜಿಂಜೀಬಾರಾ) ಝಾಂಬಿಯಾ, ಮಾಲವಿ, ಜೈರ್, ಇಥಿಯೋಪಿಯಾ ಅಥವಾ ವಿಯೆಟ್ನಾಂಗಳಿಂದ ವಲಸೆ ಬಂದ ಭಾರತೀಯ ಮೂಲದ ವ್ಯಕ್ತಿ

**('ಅ' ಯಿಂದ 'ಇ' ವರೆಗೆ ಕಾಣಿಸಿರುವ ಅಭ್ಯರ್ಥಿಯ ವಲಸೆ ಬಂದ ಅವನು ವಾಸಿಸುವ ಜಿಲ್ಲಾ ಸರಹದ್ದಿನ ಜಿಲ್ಲಾಧಿಕಾರಿ / ಜಿಲ್ಲಾ ನ್ಯಾಯಾಧೀಶರಿಂದ ಪ್ರಮಾಣ ಪತ್ರ ಪಡೆದು ಒಪ್ಪಿಸಬೇಕು. ಇಲ್ಲದ ಪಕ್ಷದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.)**

**(ಈ) ಕರ್ನಾಟಕ ರಾಜ್ಯದ ವ್ಯಾಪ್ತಿಯ ಅಧಿಸೂಚಿತ ಅರಣ್ಯದೊಳಗೆ ವಾಸಿಸುವವರಾಗಿರತಕ್ಕದ್ದು.**

3.2. ಕನ್ನಡ ಭಾಷೆ ಮಾತನಾಡಲು ಮತ್ತು ತಿಳಿದುಕೊಳ್ಳಲು ಶಕ್ತರಾಗಿರಬೇಕು.

3.3. **ಅನುಭವ:** ಆನೆ ನಿರ್ವಹಣೆಯಲ್ಲಿ ಅನುಭವ ಹೊಂದಿರುವುದು ಕಡ್ಡಾಯವಾಗಿರುತ್ತದೆ.

3.4. **ವಯೋಮಿತಿ:**

ಕರ್ನಾಟಕ ನಾಗರೀಕ ಸೇವಾ ನಿಯಮಗಳು (ಸಾಮಾನ್ಯ ನೇಮಕಾತಿ) 1977 ರ ನಿಯಮ 6 ರಂತೆ ಅರ್ಜಿ ಸಲ್ಲಿಸಲು ಅಭ್ಯರ್ಥಿಯು ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಮತ್ತು ಈ ಕೆಳಕಂಡಂತೆ ಗರಿಷ್ಟ ವಯೋಮಿತಿ ಮೀರಿರಬಾರದು.

| | |
|---|---|
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ– 1 | ಗರಿಷ್ಟ ವಯೋಮಿತಿ 40 ವರ್ಷಗಳು |
| ಇತರ ಪ್ರವರ್ಗಗಳು ಅಂದರೆ 2(ಎ) ಅಥವಾ 2(ಬಿ) ಅಥವಾ 3(ಎ) ಅಥವಾ 3(ಬಿ) | ಗರಿಷ್ಟ ವಯೋಮಿತಿ 38 ವರ್ಷಗಳು |
| ಇತರೆ ಅಭ್ಯರ್ಥಿಗಳಿಗೆ | ಗರಿಷ್ಟ ವಯೋಮಿತಿ 35 ವರ್ಷಗಳು |

4. **ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿದ ಅಭ್ಯರ್ಥಿಗಳು ಸಲ್ಲಿಸಬೇಕಾದ ಪ್ರಮಾಣ ಪತ್ರಗಳ ವಿವರ:**

ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರವನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು.

4.1.1. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ "ನಮೂನೆ – ಡಿ" ರಲ್ಲಿ

4.1.2. ಪ್ರವರ್ಗ–I ರ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ "ನಮೂನೆ – ಇ" ರಲ್ಲಿ

4.1.3. ಪ್ರವರ್ಗ– II (ಎ), II (ಬಿ), III (ಎ) ಮತ್ತು III (ಬಿ) ರ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ "ನಮೂನೆ –ಎಫ್" ರಲ್ಲಿ

**ಸೂಚನೆ:** "ನಮೂನೆ–ಎಫ್" ಪ್ರಮಾಣ ಪತ್ರವು ಅಧಿಸೂಚನೆಯ ದಿನಾಂಕಕ್ಕೆ ಐದು ವರ್ಷಕ್ಕಿಂತ ಹೆಚ್ಚು ಹಳೆಯ ಸಮಯದ್ದಾಗಿರಬಾರದು ಎಂಬುದನ್ನು ಅಭ್ಯರ್ಥಿಯು ಗಮನದಲ್ಲಿಡತಕ್ಕದ್ದು. ಅವಧಿ ಮೀರಿದ ಪ್ರಮಾಣ ಪತ್ರವನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

4.1.4 ಯೋಜನಾ ನಿರಾಶ್ರಿತ ಮೀಸಲಾತಿ ವರ್ಗೀಕರಣದಲ್ಲಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರಿಂದ ನಮೂನೆ–3 ರಲ್ಲಿ ನೀಡಿರುವ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.

*5.* ***ಅರ್ಜಿ ನಮೂನೆ:***

ಈ ಅಧಿಸೂಚನೆಯೊಂದಿಗೆ ಪ್ರಕಟಿಸಿರುವ ಅರ್ಜಿ ನಮೂನೆಯಲ್ಲಿ ಮಾತ್ರ ಅಭ್ಯರ್ಥಿಗಳು ಅರ್ಜಿಯನ್ನು ಬೆರಳಚ್ಚು / ಕಂಪ್ಯೂಟರ್ ಪ್ರಿಂಟ್ ಮಾಡಿಸಿ, ಭರ್ತಿ ಮಾಡಿದ ಅರ್ಜಿಯನ್ನು ಸಲ್ಲಿಸತಕ್ಕದ್ದು.

5.1. **ಅರ್ಜಿಗಳನ್ನು ಸಲ್ಲಿಸಬೇಕಾದ ವಿಳಾಸ:**

ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ
ಮೈಸೂರು ವೃತ್ತ, ಅರಣ್ಯ ಭವನ, ಅಶೋಕಪುರಂ,
ಮೈಸೂರು –570008.

5.2. **ಸ್ವೀಕೃತ ಅರ್ಜಿಗಳ ಪರಾಮರ್ಶೆ / ನೇಮಕಾತಿ ವಿಧಾನ:**

ಅಧಿಸೂಚನೆಯಲ್ಲಿ ನಿಗಧಿಪಡಿಸಿರುವ ಅರ್ಹತೆ ಮತ್ತು ದಾಖಲೆಗಳ ಆಧಾರದ ಮೇಲೆ ಸ್ವೀಕೃತ ಅರ್ಜಿಗಳನ್ನು ಪರಿಶೀಲಿಸಿ, ಪುರಸ್ಕರಿಸಿದ ಅರ್ಜಿಗಳು ಹಾಗೂ ತಿರಸ್ಕರಿಸಿದ ಅರ್ಜಿಗಳಾಗಿ ವಿಂಗಡಿಸಿ ಅರ್ಹ ಅರ್ಜಿಗಳ ಅಭ್ಯರ್ಥಿಗಳಿಗೆ ನಿಗಧಿಪಡಿಸಲಾದ ಸಂದರ್ಶನದ ದಿನಾಂಕಕ್ಕೆ ಮೂಲ ದಾಖಲಾತಿಗಳು ಹಾಗೂ ಅವುಗಳ ದೃಢೀಕೃತ ಪ್ರತಿಗಳೊಂದಿಗೆ ಆಯ್ಕೆ ಸಮಿತಿಯ ಮುಂದೆ ಹಾಜರಾಗಲು ಸಂದರ್ಶನ ಚೀಟಿಯನ್ನು ಕಳುಹಿಸಲಾಗುವುದು ಹಾಗೂ ಅಭ್ಯರ್ಥಿಗಳು ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

6. **ಸಂದರ್ಶನ ಪ್ರಕ್ರಿಯೆ ಮತ್ತು ನೇಮಕಾತಿ ವಿಧಾನ:**

6.1 ಸಂದರ್ಶನಕ್ಕೆ ನಿಗಧಿಪಡಿಸಿದ ದಿನಾಂಕದಂದು ನಿಗಧಿತ ಸಮಯ ಹಾಗೂ ಸ್ಥಳಕ್ಕೆ ಅಭ್ಯರ್ಥಿಗಳು ಅಗತ್ಯ ಎಲ್ಲಾ ಮೂಲ ಹಾಗೂ ದೃಢೀಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಆಯ್ಕೆ ಸಮಿತಿಯ ಮುಂದೆ ಹಾಜರಾಗಬೇಕು.

6.2 ದಾಖಲಾತಿಗಳ ಪರಿಶೀಲನೆಗಾಗಿ ಈ ಕೆಳಕಂಡ ಮೂಲ ದಾಖಲಾತಿ ಹಾಗೂ ದೃಢೀಕೃತ ದಾಖಲಾತಿಗಳನ್ನು ಆಯ್ಕೆ ಸಮಿತಿಯ ಮುಂದೆ ಹಾಜರುಪಡಿಸತಕ್ಕದ್ದು.

- ಆನೆ ನಿರ್ವಹಣೆಯಲ್ಲಿ ಅನುಭವ ಹೊಂದಿರುವ ಬಗ್ಗೆ ವಲಯ ಅರಣ್ಯಾಧಿಕಾರಿ ಅಥವಾ ಅವರಿಗಿಂತ ಮೇಲ್ಪಟ್ಟ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
- ಕರ್ನಾಟಕ ರಾಜ್ಯ ವ್ಯಾಪ್ತಿಯ ಅಧಿಸೂಚಿತ ಅರಣ್ಯದೊಳಗೆ ಪ್ರಸ್ತುತ ವಾಸ ಮಾಡುತ್ತಿದ್ದಾರೆ ಎಂಬ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರಿಂದ ಪಡೆದ ಪತ್ರ
- ಜನ್ಮ ದಿನಾಂಕದ ದೃಢೀಕರಣ ಪತ್ರ ( ಜನನ ಪ್ರಮಾಣ ಪತ್ರ / ಶಾಲಾ ದಾಖಲಾತಿ ಪತ್ರ / ಆಧಾರ ಕಾರ್ಡ್ )
- ನಿಗಧಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರ

**6.3** ಈ ದಾಖಲಾತಿಗಳನ್ನು ಸಲ್ಲಿಸಲು ಯಾವುದೇ ಕಾಲ ವಿಸ್ತರಣೆ ನೀಡಲಾಗುವುದಿಲ್ಲ.

**6.4** ವಿವಿಧ ಪ್ರವರ್ಗಗಳ ಅಡಿಯಲ್ಲಿ ಮೀಸಲಾತಿ ಕೋರಿದ ಅಭ್ಯರ್ಥಿಗಳು, ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರುಪಡಿಸದೇ ಇದ್ದ ಪಕ್ಷದಲ್ಲಿ ಅವರು ಕೋರಿರುವ ಮೀಸಲಾತಿಯನ್ನು ರದ್ದುಪಡಿಸಿ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಅವರನ್ನು ಪರಿಗಣಿಸಲಾಗುವುದು.

**6.5** ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆ ನಂತರ ಸಂದರ್ಶನ ಪ್ರಕ್ರಿಯೆಗೆ ಆಯ್ಕೆ ಸಮಿತಿ ಮುಂದೆ ಹಾಜರಾಗಬೇಕಾಗುತ್ತದೆ.

**6.6** ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳನ್ನು ಕನ್ನಡ ಭಾಷೆ ಮಾತನಾಡುವ ಮತ್ತು ತಿಳಿದುಕೊಳ್ಳುವ ಸಾಮರ್ಥ್ಯದ ಬಗ್ಗೆ ಹಾಗೂ ಆನೆ ನಿಭಾಯಿಸುವ ಸಾಮರ್ಥ್ಯದ ಬಗ್ಗೆ ಗರಿಷ್ಟ ನೂರು (100) ಅಂಕಗಳಿಗಾಗಿ ಪರೀಕ್ಷೆಗೆ ಒಳಪಡಿಸಲಾಗುವುದು.

**6.7** ನಂತರ, ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಹಾಗೂ ಮೀಸಲಾತಿ ನಿಯಮಗಳ ಅನುಸಾರ ಅರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಸಿದ್ದಪಡಿಸಿ, ಆಯ್ಕೆ ಪಟ್ಟಿಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ, ಸದರಿ ಆಯ್ಕೆ ಪಟ್ಟಿಯನ್ನು ನೇಮಕಾತಿ ಪ್ರಾಧಿಕಾರಿಗೆ ಕಳುಹಿಸಲಾಗುವುದು.

**6.8** ನೇಮಕಾತಿ ಪ್ರಾಧಿಕಾರದಿಂದ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ನೇಮಕಾತಿ ಹೊಂದಲು ಎಲ್ಲಾ ರೀತಿಯಲ್ಲಿಯೂ ನೇಮಕಾತಿಗೆ ಅರ್ಹತೆ ಹೊಂದಿರುವ ಬಗ್ಗೆ ಖಾತರಿಪಡಿಸಿಕೊಂಡು ನೇಮಕಾತಿ ಪ್ರಾಧಿಕಾರದಿಂದ ನೇಮಕಾತಿ ಆದೇಶ ನೀಡಲಾಗುವುದು.

7. **ಇತರೆ ನಿಬಂಧನೆಗಳು ಹಾಗೂ ಗಮನಿಸಬೇಕಾದ ಅಂಶಗಳು:**

7.1. ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅಂಚೆಯ ಮೂಲಕ ಸಲ್ಲಿಸುವ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಇಲಾಖೆಯು ಜವಾಬ್ದಾರಿಯಾಗುವುದಿಲ್ಲ.

7.2. ನಿಗಧಿತ ನಮೂನೆಯಲ್ಲಿಲ್ಲದ ಅಥವಾ ಅಪೂರ್ಣ ಮಾಹಿತಿ ನೀಡಿದ ಅರ್ಜಿಗಳನ್ನು ಅನರ್ಹ ಅರ್ಜಿಗಳೆಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಅಭ್ಯರ್ಥಿಯು ಅರ್ಜಿಯಲ್ಲಿ ಮಾಹಿತಿಯನ್ನು ಸಮರ್ಪಕವಾಗಿ ತುಂಬದೇ ಇದ್ದ ಕಾರಣಕ್ಕೆ ಅರ್ಜಿಯು ತಿರಸ್ಕೃತವಾದ ಪಕ್ಷದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ವಂಚಿತರಾದ ಪಕ್ಷದಲ್ಲಿ ತತ್ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

7.3. ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದ್ದಲ್ಲಿ, ಅಂತಹ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು.

7.4. ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ವಿವರಗಳನ್ನು ನಮೂದಿಸಿದ್ದಲ್ಲಿ, ಅಂತಹ ಅಭ್ಯರ್ಥಿಯ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

7.5. ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

7.6. ಕಾನೂನು ಬಾಹಿರನೆಂದು ಸಂಸ್ಥೆ ಅಥವಾ ಸಂಘ ಘೋಷಿಸಲಾದ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಘ ಸಂಸ್ಥೆಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ, ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

7.7. ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ, ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

7.8. ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿ / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೆ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

7.9. ಅಭ್ಯರ್ಥಿಯು ನೇಮಕಾತಿ ಸಂದರ್ಶನಕ್ಕೆ ಬೇರೊಬ್ಬ ವ್ಯಕ್ತಿಯನ್ನು ತಮ್ಮ ಪರವಾಗಿ ಕಳುಹಿಸಿದ್ದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆ ಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

8. **ಆಯ್ಕೆಯಾದ ಅಭ್ಯರ್ಥಿಗಳ ಖಾಯಂ ಪೂರ್ವ/ಪರಿಕ್ಷಾರ್ಥ ಅವಧಿ ಹಾಗೂ ನಿಯುಕ್ತಿ:**

8.1. ಆಯ್ಕೆಯಾದ ಅಭ್ಯರ್ಥಿಗಳು 24 ತಿಂಗಳುಗಳು ಖಾಯಂ ಪೂರ್ವ/ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವಾಗಿ ಪೂರೈಸತಕ್ಕದ್ದು, ಆಯ್ಕೆಯಾದ ಅಭ್ಯರ್ಥಿಯು ಪ್ರಪ್ರಥಮವಾಗಿ ಅವರನ್ನು ನೇಮಕ ಮಾಡುವ ಸ್ಥಳದಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಪೂರೈಸತಕ್ಕದ್ದು.

8.2. ಸರ್ಕಾರಿ ಆದೇಶ ಸಂಖ್ಯೆ-ಎಫ್‌ಡಿಎಸ್‌ಪಿಎಸ್-04/ಪಿಇಟಿ/2005 ದಿನಾಂಕ: 31.03.2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

8.3. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೆ ಇಟ್ಟುಕೊಳ್ಳಲು ಸೂಚಿಸಿದೆ.

8.4. ಪ್ರಕಟಿಸಲಾಗಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ, ಅದನ್ನು ಇಲಾಖಾ ವೆಬ್‌ಸೈಟ್ (www.kfdrecruitment.in) ನಲ್ಲಿ ಮತ್ತು ಅರಣ್ಯ ಇಲಾಖಾ ಕಛೇರಿ ನಾಮಫಲಕದಲ್ಲಿ ಪ್ರಕಟಿಸಲಾಗುವುದು.

8.5. ಈ ಕಛೇರಿಯಿಂದ ಯಾವುದೇ ತಿಳುವಳಿಕೆ ದೊರೆಯದ ಅಭ್ಯರ್ಥಿಗಳು ನೇಮಕಾತಿಗೆ ಆಯ್ಕೆಯಾಗಿರುವುದಿಲ್ಲವೆಂದು ತಿಳಿಯುವುದು.

8.6. ಆಯ್ಕೆಗೊಂಡು ನೇಮಕಾತಿ ಹೊಂದುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಎಲ್ಲಾ ಸೇವಾ ನಿಯಮಗಳಿಗೆ ಒಳಪಡುತ್ತಾರೆ.

ಅರಣ್ಯ ಸಂರಕ್ಷಣಾಧಿಕಾರಿ
ಹಾಗೂ ಆನೆ ಕಾವಾಡಿ ಹುದ್ದೆಯ ನೇರ
ನೇಮಕಾತಿ ಆಯ್ಕೆ ಪ್ರಾಧಿಕಾರ,
ಮೈಸೂರು ವೃತ್ತ, ಮೈಸೂರು.